## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 203
ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 06.12.2023.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ಒಟ್ಟು 63.08 ಲಕ್ಷ ಎಕರೆ ಸರ್ಕಾರಿ ಭೂಮಿಯಲ್ಲಿ 14.27 ಲಕ್ಷ ಎಕರೆ ಒತ್ತುವರಿಯಾಗಿರುವುದನ್ನು ತೆರವುಗೊಳಿಸುವ ಕಾರ್ಯಾಚರಣೆ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.<br><br>ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ, ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ಪ್ರಕರಣವನ್ನು ದಾಖಲಿಸಲಾಗುತ್ತಿದೆ.ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ವಿವಿಧ ಪ್ರಕರಣಗಳಲ್ಲಿ ಈವರೆಗೂ 75 ಜನರಿಗೆ ಒಂದು ವರ್ಷದಂತೆ ಶಿಕ್ಷೆ ಹಾಗೂ ದಂಡ ವಿಧಿಸಲಾಗಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020, ದಿ: 20.01.2020 ರಂತೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು/ಭೂ ಕಬಳಿಕೆಗೆ ದುಪ್ರೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸಲು ಸೂಚನೆ ನೀಡಲಾಗಿದೆ. |
| ಆ) | ತೆರವು ಕಾರ್ಯಾಚರಣೆ ಕೈಗೊಳ್ಳುವ ಸಲುವಾಗಿ ಜಿಲ್ಲಾಧಿಕಾರಿಗಳಿಗೆ ಮಾಸಿಕ ಗುರಿ ನಿಗಧಿ ಪಡಿಸಲಾಗಿದೆಯೇ; ಗುರಿ ನಿಗದಿಪಡಿಸಿದ್ದಲ್ಲಿ ಎಷ್ಟು ಪ್ರಮಾಣದ ಭೂ ಒತ್ತುವರಿಯನ್ನು ಈಗಾಗಲೇ ತೆರವುಗೊಳಿಸಲಾಗಿದೆ; | ರಾಜ್ಯಾದ್ಯಾಂತ ಒಟ್ಟು 63,32,486 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 14,72,493 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. ವಿವಿಧ ನ್ಯಾಯಾಲಯಗಳಲ್ಲಿರುವ ಪ್ರಕರಣಗಳು, ಅಕ್ರಮ ಸಕ್ರಮ ಯೋಜನೆ ಮತ್ತು ಸಾರ್ವಜನಿಕ ಉದ್ದೇಶಗಳಿಗೆ ಬಳಕೆಯಾಗಿರುವ ಒಟ್ಟು 10,82,752 ಎಕರೆ/ಗುಂಟೆ ಜಮೀನು ಹೊರತುಪಡಿಸಿ, ಉಳಿದಂತೆ 3,89,741 ಎಕರೆ/ಗುಂಟೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಬೇಕಾಗಿರುತ್ತದೆ. ಇದರಲ್ಲಿ 2,73,778 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. ಉಳಿದಂತೆ 1,15,963 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ. |

| | | |
|---|---|---|
| | | |
| ಇ) | ಒತ್ತುವರಿ ತೆರವುಗೊಳಿಸಿರುವ ಹಾಗೂ ತೆರವುಗೊಳಿಸಲಾಗುವ ಸರ್ಕಾರಿ ಭೂಮಿ ಸಂರಕ್ಷಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಒತ್ತುವರಿಯಿಂದ ತೆರವುಗೊಳಿಸಲಾದ ಸರ್ಕಾರಿ ಜಮೀನುಗಳಿಗೆ ಕಂದಕ, ತಂತಿಬೇಲಿ ಹಾಕಿ ಮತ್ತು ನಾಮಫಲಕ ಅಳವಡಿಸಿ ಸಂರಕ್ಷಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ123 ಎಲ್‌ಜಿಕ್ಯೂ 2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು